ಕರ್ನಾಟಕ ವಿಧಾನ ಪರಿಷತ್ತು

1. ಚುಕ್ಕೆ ಗುರುತಿನ ಪ್ರಶ್ನೆ : 2249
2. ಸದಸ್ಯರ ಹೆಸರು : ಶ್ರೀ ಬಸವರಾಜ ಪಾಟೀಲ್ ಇಟಗಿ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ)
3. ಉತ್ತರಿಸಬೇಕಾದ ದಿನಾಂಕ :26.03.2021
4. ಉತ್ತರಿಸುವ ಸಚಿವರು : ಮಾನ್ಯ ಮೂಲಸೌಲಭ್ಯ ಅಭಿವೃದ್ಧಿ, ಹಜ್ ಮತ್ತು ವಕ್ಫ ಸಚಿವರು.

ಕ್ರ ಸಂ	ಪ್ರಶ್ನೆ	ಉತ್ತರ
(ಅ)	ರಾಯಚೂರು ವಿಮಾನ ನಿಲ್ದಾಣದ ಕಾಮಗಾರಿಯು ಮಂದಗತಿಯಲ್ಲಿ ನಡೆಯುತ್ತಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ;	ಹೌದು
(ಆ)	ಬಂದಿದ್ದಲ್ಲಿ, ಕಾಮಗಾರಿ ಪೂರ್ಣಗೊಳಿಸಲು ಸರ್ಕಾರ ಕೈಗೊಂಡ ಕ್ರಮವೇನು; ಮತ್ತು ಯಾವ ಕಾಲಮಿತಿಯಲ್ಲಿ ಕಾಮಗಾರಿಯನ್ನು ಪೂರ್ಣಗೊಳಿಸಲಾಗುವುದು;	ರಾಯಚೂರು ಜಿಲ್ಲೆ ಯರಮರಸ್ ಇಲ್ಲಿ ವಿಮಾನ ನಿಲ್ದಾಣಕ್ಕಾಗಿ ಸ್ವಾಧೀನಪಡಿಸಿ ಕೊಂಡಿರುವ ಜಮೀನಿನ ಸುತ್ತಲು ಯರಮರಸ್ ಶಾಖೋತ್ಪನ್ನ ವಿದ್ಯುತ್ ಕೇಂದ್ರ, ವಿದ್ಯುತ್ ಮಾರ್ಗಗಳು ಮತ್ತು ಎತ್ತರದ ಚಿಮಿಣಿಗಳು ವಿಮಾನ ಹಾರಾಟಕ್ಕೆ ಅಡಚಣೆ ಉಂಟಾಗುತ್ತಿರುವ ಹಿನ್ನೆಲೆಯಲ್ಲಿ, ವಿಮಾನ ಕಾರ್ಯಾಚರಣೆಯನ್ನು ಕೈಗೊಳ್ಳುವ ಬಗ್ಗೆ ಭಾರತೀಯ ವಿಮಾನ ನಿಲ್ದಾಣಗಳ ಪ್ರಾಧಿಕಾರದೊಂದಿಗೆ ಪರಿಶೀಲನೆ ಹಂತದಲ್ಲಿದೆ.. ಭಾರತೀಯ ವಿಮಾನ ನಿಲ್ದಾಣಗಳ ಪ್ರಾಧಿಕಾರ ಇವರ ವರದಿಯ ಆಧಾರದ ಮೇಲೆ ವಿಮಾನ ನಿಲ್ದಾಣದ ಅಭಿವೃದ್ಧಿಗೆ ಸಂಬಂಧಿಸಿದಂತೆ ಕ್ರಮಕೈಗೊಳ್ಳುವ ಬಗ್ಗೆ ಪರಿಶೀಲಿಸಲಾಗುವುದು.
(ಇ)	ಸದರಿ ಕಾಮಗಾರಿಗಾಗಿ ಇಲ್ಲಿಯವರೆಗೆ ಬಿಡುಗಡೆಯಾದ ಹಣವೆಷ್ಟು?	ಪ್ರಸ್ತುತ ರಾಯಚೂರು ವಿಮಾನ ನಿಲ್ದಾಣದ ಅಭಿವೃದ್ಧಿ ಯೋಜನೆಯು ಇನ್ನು ಪರಿಶೀಲನಾ ಹಂತದಲ್ಲಿರುವುದರಿಂದ, ಸದರಿ ಕಾಮಗಾರಿಗಾಗಿ ಈವರೆಗೆ ಯಾವುದೇ ಅನುದಾನ ಬಿಡುಗಡೆ ಮಾಡಿರುವುದಿಲ್ಲ.

ಸಂಖ್ಯೆ:ಮೂಲಅಇ 54 ರಾಲಅವಿ 2021

(ಆನಂದ್ ಸಿಂಗ್)
ಮೂಲಸೌಲಭ್ಯ ಅಭಿವೃದ್ಧಿ, ಹಜ್ ಮತ್ತು
ವಕ್ಫ್ ಸಚಿವರು